ಎರಡನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ
ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು

ಸ್ಪೆಷಲ್ ಕೇಸ್ ನಂಃ 42/2018

(ಫ್ರಾಸಾ-4 ಚಾಸಾ-9)
ಸಾಕ್ಷಿಗೆ ಪ್ರಮಾಣ ವಚನ ಭೋದಿಸಲಾಯಿತು
ದಿಃ 16.07.2025

| | | |
|---|---|---|
| ಸಾಕ್ಷಿದಾರರ ಹೆಸರು | - | ಹರೀಶ್ |
| ತಂದೆಯ ಹೆಸರು | - | ಸೀನಪ್ಪ |
| ವಯಸ್ಸು | - | 43 ವರ್ಷ, |
| ಉದ್ಯೋಗ | - | ಖಾಸಗಿ ಕೆಲಸ |
| ವಾಸ | - | ಸಾದಮಂಗಳ |

ಮುಖ್ಯ ವಿಚಾರಣೆಃ ಮಾನ್ಯ ವಿಶೇಷ ಸರ್ಕಾರಿ ಅಭಿಯೋಜಕರಿಂದಃ

ಚಾಸಾ-2, 3 ಗೊತ್ತು. ಈಗ ನಾನು ಒಂದು ದಾಖಲೆ ನೋಡುತ್ತಿದ್ದು ಸದರಿ ದಾಖಲೆಯಲ್ಲಿ ನನ್ನ ಸಹಿ ಇರುತ್ತದೆ. ಸದರಿ ದಾಖಲೆ ನಿಶಾನೆ ಪಿ-2 ಪಂಚನಾಮೆ ಇದ್ದು ಅದರಲ್ಲಿರುವ ಸಾಕ್ಷಿ ಸಹಿಯನ್ನು ನಿಶಾನೆ ಪಿ-2(ಬಿ) ಎಂದು ಗುರುತಿಸಲಾಯಿತು. ದಿಃ25.05.2017 ರಂದು ನಾಲ್ಕು ಹುಡುಗರು ವಿಲ್ಲಾದಲ್ಲಿ ಸಂಪ್ ಕ್ಲೀನ್ ಮಾಡಲು ಬಂದಿದ್ದು ಅದರಲ್ಲಿ ಒಬ್ಬರು ಕಾಲು ಜಾರಿ ಸಂಪಿನ ಒಳಗಡೆ ಬಿದ್ದಿರುವ ಬಗ್ಗೆ ಸದರಿ ವಿಲ್ಲಾದ ಬಳಿ ಪೋಲಿಸರು ಮಧ್ಯಾಹ್ನ 02.00-03.00 ಘಂಟೆ ಸಮಯದಲ್ಲಿ ಸ್ಥಳದಲ್ಲಿ ಇದ್ದು ಆಗ ನಾನು ನಿಪಿ-2 ದಾಖಲೆಗೆ ಸಹಿ ಮಾಡಿರುತ್ತೇನೆ. ಪೋಲಿಸರು ಅಲ್ಲಿ ಬಕೇಟ್, ಹಗ್ಗ ಮತ್ತು ಚಪ್ಪಲಿಯನ್ನು ತೋರಿಸಿದರು. ಅವುಗಳನ್ನು ನೋಡಿದರೆ ಗುರುತಿಸಬಲ್ಲೆ. ಸಾಕ್ಷಿ ನ್ಯಾಯಾಲಯದ ಮುಂದೆ ಇರುವ ಬಕೇಟ್, ಚಪ್ಪಲಿ ಹಾಗೂ ಹಗ್ಗವನ್ನು ನೋಡಿ ಗುರುತಿಸಿದ್ದು ಅವುಗಳು ಈಗಾಗಲೇ ಮು.ಮಾ-1 ರಿಂದ 3 ಎಂದು ಗುರುತಾಗಿರುತ್ತವೆ. ಇವುಗಳನ್ನು ಹೊರತುಪಡಿಸಿ ಪೋಲಿಸರು ನನಗೆ ಬೇರೆನನ್ನೂ ತೋರಿಸಲಿಲ್ಲ. ಸ್ಥಳದಲ್ಲಿ ಆಗ ನನ್ನೊಂದಿಗೆ ಹಾಜರಿದ್ದು ಸಹಿ ಮಾಡಿರುತ್ತಾರೆ, ಅವರ ಹೆಸರು ನನಗೆ ಗೊತ್ತಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಎಸ್‌ಪಿಪಿ ರವರು ವಿನಂತಿಸಿದ್ದರಿಂದ ಸಾಕ್ಷಿಯ ಪಂಚನಾಮೆ ಹಾಗೂ ಇತರೆ ನ್ಯಾಯಾಲಯದ ದಾಖಲಾತಿಗಳನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು.)

<u>ಪಾಟೀ ಸವಾಲುಃ ಮಾನ್ಯ ವಿಶೇಷ ಸರ್ಕಾರಿ ಅಭಿಯೋಜಕರಿಂದಃ</u>

2. ಪೋಲಿಸರು ಸ್ಥಳದಲ್ಲಿ ಈಗ ತೋರಿಸಿದ ಮು.ಮಾ-4 ಕಾಚಾವನ್ನು ತೋರಿಸಿದರು ಎಂದರೆ ಸರಿ. ಸ್ಥಳದಲ್ಲಿ ಚಾಸಾ-1 ಮತ್ತು 6 ಹಾಜರಿದ್ದು ಸಹಿ ಮಾಡಿರುತ್ತಾರೆ ಎಂದರೆ ಸರಿ.

**<u>ಪಾಟೀ ಸವಾಲುಃ 1 ನೇ ಆರೋಪಿ ಪರ ಶ್ರೀ ಎನ್ ಐ ಜಿ ವಕೀಲರಿಂದಃ</u>**

3. ಮು.ಮಾ-1 ರಿಂದ 4 ಇವುಗಳನ್ನು ಇದೇ ಮೊದಲ ಬಾರಿಗೆ ನ್ಯಾಯಾಲಯದಲ್ಲಿ ನೋಡುತ್ತಿದ್ದೇನೆ ಎಂದರೆ ಸರಿಯಲ್ಲ. ದಿಃ25.05.2017 ರಂದು ಪೋಲಿಸರು ಕರೆಸಿಕೊಂಡಾಗ ನೀವು ಎಲ್ಲಿದ್ದಿರಿ ಎಂದರೆ ನಾನು ವೈಟ್ ಫೀಲ್ಡ್ ನಲ್ಲಿಯೇ ಇದ್ದೆ. ನನಗೆ ಕನ್ನಡ ಓದಲು ಬರೆಯಲು ಬರುತ್ತದೆ. ಪಂಚನಾಮೆಯಲ್ಲಿ ಬರೆದಿರುವ ವಿಷಯಗಳು ನನಗೆ ಗೊತ್ತಿಲ್ಲ ಎಂದರೆ ಸರಿಯಲ್ಲ. ನಾನು ಪಂಚನಾಮೆಗೆ ಸಹಿ ಮಾಡುವ ಸಮಯದಲ್ಲಿ ಪೋಲಿಸರು ಮು.ಮಾ-1 ರಿಂದ 4 ಅನ್ನು ಸ್ಥಳದಲ್ಲಿ ಇಟ್ಟಿದ್ದರು ಎಂದರೆ ಸರಿ. ಪೋಲಿಸರು ನನ್ನ ಸಮಕ್ಷಮ ಯಾವುದೇ ವಸ್ತುಗಳನ್ನು ಜಪ್ತಿ ಮಾಡಿಲ್ಲ ಎಂದರೆ ಸರಿಯಲ್ಲ. ನಿಪಿ-2 ಪಂಚನಾಮೆಗೆ ನಾನು ಠಾಣೆಯಲ್ಲಿ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲುಃ 2 ಮತ್ತು 3 ನೇ ಆರೋಪಿತರ ಪರ ಶ್ರೀ ಎಸ್ ಎ ಜಿ ವಕೀಲರಿಂದಃ</u>**

2 ಮತ್ತು 3 ನೇ ಆರೋಪಿತರ ಪರ ವಕೀಲರು 1 ನೇ ಆರೋಪಿ ಪರ ವಕೀಲರು ಮಾಡಿದ ಪಾಟೀ ಸವಾಲನ್ನೇ ಅಳವಡಿಸಿಕೊಳ್ಳುವುದಾಗಿ ನಿವೇದಿಸಿರುತ್ತಾರೆ.

**<u>ಮರುವಿಚಾರಣೆಃ ಇಲ್ಲ</u>**

(ಸಾಕ್ಷಿ ಹೇಳಿದಂತೆ ಹೇಳಿಕೆಯನು ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಿ ಓದಿ ಹೇಳಿದ್ದು ಸಾಕ್ಷಿ ಸರಿ ಇರುವುದಾಗಿ ಒಪ್ಪಿರುತ್ತಾರೆ ಎಂದು ದೃಡೀಕರಿಸುತ್ತೇನೆ)

ಓ ಹೇ ಸಾ ಸ ಸಹಿ ಮಾಡಿದ್ದಾರೆ,

(ಕೆ. ಗುರುಪ್ರಸಾದ್)
ಎರಡನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ
ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು